ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ  ದಿನಾಂಕ : DATE 8/1/2018


# ಬಿ, ಸಿ ದರ್ಜೆಯ ಕಾಲೇಜು, ವಿವಿ ಮುಚ್ಚಿ: ರಾಜ್ಯಪಾಲ!

## ಉನ್ನತ ಶ್ರೇಣಿ ಇಲ್ಲದ ಸಂಸ್ಥೆಯಿಂದ ಮಕ್ಕಳಿಗೆ ನಷ್ಟ ಶಿಕ್ಷಣ ಸಂಸ್ಥೆ ಗುಣಮಟ್ಟ ಬಗ್ಗೆ ಕುಲಾಧಿಪತಿ ಬೇಸರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನ್ಯಾಕ್ ಸಂಸ್ಥೆಯು ಉತ್ತಮ ಗುಣಮಟ್ಟದ ಶಿಕ್ಷಣ ಸಂಸ್ಥೆಗಳಿಗೆ ಉನ್ನತ ರ್‍ಯಾಂಕ್ ನೀಡುತ್ತದೆ. ಹಲವು ಕಾಲೇಜು ಹಾಗೂ ವಿಶ್ವವಿದ್ಯಾಲಯಗಳು ಬಿ ಮತ್ತು ಸಿ ಶ್ರೇಣಿ ಪಡೆಯುತ್ತಿದ್ದು, ಇಂತಹ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳಿಂದ ವಿದ್ಯಾರ್ಥಿಗಳಿಗೆ ನಷ್ಟ. ಇಂತಹ ಕಾಲೇಜು-ವಿಶ್ವವಿದ್ಯಾಲಯಗಳನ್ನು ಬಂದ್ ಮಾಡುವುದೇ ಲೇಸು ಎಂದು ರಾಜ್ಯಪಾಲ ವಿ.ಆರ್. ವಾಲಾ ಅಭಿಪ್ರಾಯಪಟ್ಟಿದ್ದಾರೆ.



ರಾಜ್ಯದಲ್ಲಿರುವ 29 ವಿಶ್ವವಿದ್ಯಾಲಯಗಳಿಗೆ ಕುಲಾಧಿಪತಿಯಾಗಿರುವ ರಾಜ್ಯಪಾಲರೇ ವಿಶ್ವವಿದ್ಯಾಲಯಗಳ ಶಿಕ್ಷಣ ಗುಣಮಟ್ಟದ ಬಗ್ಗೆ ತೀವ್ರ ಬೇಸರ ವ್ಯಕ್ತಪಡಿಸಿರುವುದು ತೀವ್ರ ಕುತೂಹಲ ಮೂಡಿಸಿದೆ.

ರಾಜಭವನದಲ್ಲಿ ನಡೆದ 'ರಾಷ್ಟ್ರೀಯ ಮೌಲ್ಯೀಕರಣ ಮತ್ತು ನ್ಯಾಕ್ ರಜತ ಮಹೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಿ ಅಥವಾ ಸಿ ಶ್ರೇಣಿ ಪಡೆದುಕೊಳ್ಳುವ ಕಾಲೇಜು ಅಥವಾ ವಿವಿಗಳ ಶಿಕ್ಷಣ ಗುಣಮಟ್ಟ ಸರಿ ಇಲ್ಲ ಎಂದು ಅರ್ಥ. ಇಂತಹ ಶ್ರೇಣಿ ಪಡೆದುಕೊಳ್ಳಲು ವಿದ್ಯಾರ್ಥಿಗಳು ವ್ಯಾಸಂಗ ಮಾಡದಿರುವುದು ಕಾರಣವಾಗಿರಬೇಕು ಅಥವಾ ಬೋಧಕರು ಸೂಕ್ತ ರೀತಿಯಲ್ಲಿ ಬೋಧನೆ ಮಾಡುತ್ತಿಲ್ಲ ಎಂದಾದರೂ ಇರಬೇಕು. ಕಡಿಮೆ ರ್‍ಯಾಂಕ್ ಪಡೆದಿರುವ ಶಿಕ್ಷಣ ಸಂಸ್ಥೆಗಳವರೇ ಯೋಚಿಸಿ. ನಿಮ್ಮ ಕಾಲೇಜು ಇರುವುದರಿಂದ ಯಾರಿಗೆ ಪ್ರಯೋಜನ ಎಂದರು.

ಕಡಿಮೆ ಶ್ರೇಣಿ ಹೊಂದಿರುವ ವಿಶ್ವವಿದ್ಯಾಲಯಗಳು ಹಾಗೂ ಕಾಲೇಜುಗಳಿಂದ ವಿದ್ಯಾರ್ಥಿಗಳಿಗೆ ನಷ್ಟ. ಹೀಗಾಗಿ ಇಂತಹ ಕಾಲೇಜುಗಳು ಸುಧಾರಿಸಿಕೊಳ್ಳದಿದ್ದರೆ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳನ್ನು ಬಂದ್ ಮಾಡುವುದೇ ಲೇಸು ಎಂದು ನುಡಿದರು.

ಉಪ ರಾಷ್ಟ್ರಪತಿ ಎಂ. ವೆಂಕಯ್ಯನಾಯ್ಡು ಮಾತನಾಡಿ, ವಿಶ್ವದ ಮೊದಲ 200 ವಿಶ್ವವಿದ್ಯಾಲಯಗಳಲ್ಲಿ ನಮ್ಮ ದೇಶದ ಒಂದೂ ವಿಶ್ವವಿದ್ಯಾಲಯ ಸ್ಥಾನ ಪಡೆದಿಲ್ಲ. ನಳಂದಾ, ತಕ್ಷಶಿಲಾ ಕಾಲದಲ್ಲಿ ವಿಶ್ವಕ್ಕೆ ಮಾದರಿಯಾಗಿದ್ದ ನಮ್ಮ ಶಿಕ್ಷಣ ವ್ಯವಸ್ಥೆ ಈಗ ಎಲ್ಲಿದೆ ಎಂಬುದನ್ನು ನಾವೇ ಪ್ರಶ್ನಿಸಿಕೊಳ್ಳಬೇಕು. ಖಾಸಗಿ ಡೀಮ್ಡ್ ವಿಶ್ವವಿದ್ಯಾಲಯಗಳು ಉತ್ತಮವಾಗಿ ಕೆಲಸ ಮಾಡುತ್ತಿವೆ. ಆದರೆ, ಸರ್ಕಾರಿ ವಿಶ್ವವಿದ್ಯಾಲಯಗಳಿಗೆ ಏನಾಗಿದೆ? ಎಂದು ಪ್ರಶ್ನಿಸಿದರು.

1